ಜನದನಿಯ ಸಾರಥಿ
ವಾರ್ತಾ ಭಾರತಿ

# ಕೇಂದ್ರ ಸಾಹಿತ್ಯ ಅಕಾಡಮಿಯಿಂದ ಗ್ರಾಮಲೋಕ ಕಾರ್ಯಕ್ರಮ



ಮಂಗಳೂರು, ಜು.3: ಹೊಸದಿಲ್ಲಿಯ ಕೇಂದ್ರ ಸಾಹಿತ್ಯ ಅಕಾಡಮಿ ಮತ್ತು ಮಂಗ್ಳುರ್ಚೆ ಮೊತಿಯಾಂ ಸಾಂಸ್ಕೃತಿಕ ಸಂಘಟನೆಯ ಜಂಟಿ ಆಶ್ರಯದಲ್ಲಿ ಬೆಳ್ತಂಗಡಿಯಲ್ಲಿ ಗ್ರಾಮಲೋಕ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು.

ಬೆಳ್ತಂಗಡಿ ಧರ್ಮಕ್ಷೇತ್ರದ ಪ್ರಧಾನ ಧರ್ಮಗುರು ಫಾ.ವಾಲ್ಟರ್ ಡಿಮೆಲ್ಲೊ ಕಾರ್ಯಕ್ರಮ ಉದ್ಘಾಟಿಸಿದರು. ಕೇಂದ್ರ ಸಾಹಿತ್ಯ ಅಕಾಡಮಿಯ ಕೊಂಕಣಿ ಸಲಹಾ ಸಮಿತಿ ಸದಸ್ಯ ಎಚ್.ಎಂ.ಪೆರ್ನಾಲ್ ಅಧ್ಯಕ್ಷತೆ ವಹಿಸಿದ್ದರು.

ಕವಿಗಳಾದ ರಾಬರ್ಟ್ ಡಿಸೋಜ ಮಡಂತ್ಯಾರ್, ಫ್ಲಾವಿಯಾ ಅಲ್ಬುಕರ್ಕ್ ಪುತ್ತೂರ್, ತೆಲ್ಮಾ ಮಾಡ್ತಾ ಮಡಂತ್ಯಾರ್ ಸ್ವರಚಿತ ಕವಿತೆಗಳನ್ನು ವಾಚಿಸಿದರು. ಗುರುವಾಯನಕೆರೆಯ ವಿದ್ಯಾ ನಾಯಕ್ ಕೊಂಕಣಿ ಶಿಶುಗೀತೆಗಳನ್ನು ಪ್ರಸ್ತುತಪಡಿಸಿದರು.

ಅಪೊಲಿನ್ ಡಿಸೋಜ ಮತ್ತು ತಂಡದವರು ಕೊಂಕಣಿ ಜೋಗುಳ ಹಾಡುಗಳನ್ನು ಮತ್ತು ರೊನಾಲ್ಡ್ ಲೋಬೊ, ರೊನಾಲ್ಡ್ ಡಿಸೋಜ, ಆರ್ವಿನ್ ಡಿಸೋಜ ಕೊಂಕಣಿ ಹಾಡುಗಳನ್ನು ಹಾಡಿದರು.

ಕೇಂದ್ರ ಸಾಹಿತ್ಯ ಅಕಾಡಮಿಯ ಕೊಂಕಣಿ ವಿಭಾಗದ ಮುಖ್ಯಸ್ಥ, ಕವಿ ಮೆಲ್ವಿನ್ ರೊಡ್ರಿಗಸ್ ಸ್ವಾಗತಿಸಿದರು. ಕೇಂದ್ರ ಸಾಹಿತ್ಯ ಅಕಾಡಮಿಯ ಕೊಂಕಣಿ ಸಲಹಾ ಸಮಿತಿಯ ಸದಸ್ಯ ಸ್ಟ್ಯಾನಿ ಬೇಳ ಕಾರ್ಯಕ್ರಮ ನಿರೂಪಿಸಿದರು. ಮಂಗ್ಳುರ್ಚೆ ಮೊತಿಯಾಂ ಸಂಘಟನೆಯ ಅಲ್ಫೋನ್ಸ್ ಮೆಂಡೋನ್ಸಾ ವಂದಿಸಿದರು.

Mangalore Edition Edition
Jul 04, 2024 Page No. 4
Powered by: erelego.com